## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು-560 027.

ಸಂ: ಕರಾಸಾ:ಕೇಕ:ಸಂ:ಸಿ2:1567:9964:2009-10 ದಿನಾಂಕ:12.03.2010

**ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ:641/2010**
**(ಸಂಚಾರ (ವಾಣಿಜ್ಯ) ಶಾಖೆಯಿಂದ ಹೊರಡಿಸಲ್ಪಟ್ಟಿದೆ)**

ವಿಷಯ: ಅಂಧರ ಉಚಿತ ಬಸ್ ಪಾಸ್ ವಿತರಣೆಯ ಬಗ್ಗೆ.

ಉಲ್ಲೇಖ: 1) ಸಾ.ಸ್ಥಾ.ಆದೇಶ ಸಂ:326/1984, ದಿ: 06.04.1984.
2) ಸಂ:ಮಮಅ:184:ಪಿಹೆಚ್‌ಪಿ:2004, ದಿ: 28.06.2004,
3) ಸುತ್ತೋಲೆ ಸಂ:ಹೆಚ್‌ಇಟಿ:ಡಿ.ಸಿ:58:07-08, ದಿ: 17.09.2007.

* * *

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ಸಾಮಾಜಿಕ ಹೊಣೆಗಾರಿಕೆಯಡಿ ಪೂರ್ಣ ಅಂಧರಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ಸುಗಳಲ್ಲಿ ರಾಜ್ಯದಾದ್ಯಂತ ಪ್ರಯಾಣಿಸಲು ಉಚಿತ ಬಸ್ ಪಾಸ್‌ಗಳನ್ನು ವಿತರಿಸುತ್ತಿದೆ. ಉಲ್ಲೇಖ (1)ರ ಆದೇಶದನ್ವಯ ಅಂಧರ ಬಸ್ ಪಾಸ್ ವಿತರಿಸಲು ಅರ್ಹ ಫಲಾನುಭವಿಗಳು ಜಿಲ್ಲಾ ವೈದ್ಯಾಧಿಕಾರಿಗಳಿಂದ ಪಡೆದ ಪೂರ್ಣ ಅಂಧತ್ವದ ದೃಢೀಕರಣ ಪತ್ರವನ್ನು ಸಲ್ಲಿಸಿ ಉಚಿತ ಬಸ್ ಪಾಸ್ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.

ಮುಂದುವರೆದು ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯು ಜಿಲ್ಲಾ ವೈದ್ಯಕೀಯ ಮಂಡಳಿಯ ಅಧ್ಯಕ್ಷರು/ಸದಸ್ಯರು ಹುದ್ದೆಗಳನ್ನು ನಮೂದಿಸಿ ಕನಿಷ್ಠ ಇಬ್ಬರು ಸದಸ್ಯರು ಸಹಿ ಮಾಡಿದ ಅಂಗವಿಕಲರ ಗುರುತಿನ ಚೀಟಿಯನ್ನು ಹಾಗೂ ಉಲ್ಲೇಖ (3)ರ ಅನ್ವಯ ತಾಲ್ಲೂಕು ವೈದ್ಯಕೀಯ ಮಂಡಳಿಯ ಅಧ್ಯಕ್ಷರು/ಸದಸ್ಯರು ಹುದ್ದೆಗಳನ್ನು ನಮೂದಿಸಿ ಕನಿಷ್ಠ ಇಬ್ಬರು ಸದಸ್ಯರು ಸಹಿ ಮಾಡಿದ ಅಂಗವಿಕಲರ ಗುರುತಿನ ಚೀಟಿಯನ್ನು ವಿತರಿಸಲು ವ್ಯವಸ್ಥೆ ಮಾಡಿದೆ. ಸದರಿ ಗುರುತಿನ ಚೀಟಿಗಳ ಆಧಾರದ ಮೇಲೂ ಅಂಧರ ಉಚಿತ ಬಸ್ ಪಾಸ್ ವಿತರಿಸಲು ಸಂಬಂಧಿಸಿದ ಇಲಾಖೆಯಿಂದ ಕೋರಿಕೆ ಇರುತ್ತದೆ.

ಮೇಲ್ಕಂಡ ಅಂಶಗಳನ್ನು ಪರಿಗಣಿಸಿ ಇನ್ನು ಮುಂದೆ ಜಿಲ್ಲಾ ವೈದ್ಯಕೀಯ ಮಂಡಳಿ ಹಾಗೂ ತಾಲ್ಲೂಕು ವೈದ್ಯಕೀಯ ಮಂಡಳಿಗಳಿಂದ ಪಡೆದ ಅಂಗವಿಕಲರ ಗುರುತಿನ ಚೀಟಿಗಳನ್ನು ಪಡೆದ ಪೂರ್ಣ ಪ್ರಮಾಣದ ಅಂಧರಿಗೆ ಉಚಿತ ಬಸ್ ಪಾಸ್ ವಿತರಿಸಲು ತೀರ್ಮಾನಿಸಿದ್ದು, ಈ ಬಗ್ಗೆ ಮುಂದಿನ ಕ್ರಮ ಕೈಗೊಳ್ಳುವುದು.

ಈ ಸಾಮಾನ್ಯ ಸ್ಥಾಯಿ ಆದೇಶವು ಕೂಡಲೇ ಜಾರಿಗೆ ಬರುತ್ತದೆ. ಇನ್ನುಳಿದಂತೆ ಈ ಮೊದಲು ಹೊರಡಿಸಿ ಜಾರಿಯಲ್ಲಿರುವ ಸಾಮಾನ್ಯ ಸ್ಥಾಯಿ ಆದೇಶ/ಸುತ್ತೋಲೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. ಸದರಿ ಆದೇಶವನ್ನು ಸ್ವೀಕರಿಸಿ ಜಾರಿಗೊಳಿಸಿದ ಬಗ್ಗೆ ಅನುಸರಣಾ ವರದಿ ನೀಡುವುದು.

ಸಹಿ/-
**ವ್ಯವಸ್ಥಾಪಕ ನಿರ್ದೇಶಕರು**

**ಪ್ರತಿಯನ್ನು:**

1) ಎಲ್ಲಾ ಹಿರಿಯ/ವಿಭಾಗೀಯ ನಿಯಂತ್ರಣಾಧಿಕಾರಿಗಳು/ವಿಭಾಗೀಯ ಸಂಚಾರ ಅಧಿಕಾರಿಗಳು, ಕ.ರಾ.ರ.ಸಾ.ನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
2) ಮುಖ್ಯ ಸಂಚಾರ ವ್ಯವಸ್ಥಾಪಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ, ಕೇಂದ್ರ ಕಛೇರಿ, ಬೆಂಗಳೂರು/ ಹುಬ್ಬಳ್ಳಿ/ಗುಲ್ಬರ್ಗಾ ರವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
3) ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
4) ಅಧ್ಯಕ್ಷರು/ಉಪಾಧ್ಯಕ್ಷರು/ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಸಿ&ಪ)/(ಭ&ಜಾ)/(ತಾ)/(ಕಾ)ರವರ ಹಿರಿಯ/